# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.04.2026  1.10 pm**

**<>><><*><><<>**

ಮುಖ್ಯಾಂಶಗಳು

- **ಪಶ್ಚಿಮ ಬಂಗಾಳ, ತಮಿಳುನಾಡು ವಿಧಾನಸಭೆ ಚುನಾವಣೆ ; ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ಇಂದು ರಾಜಕೀಯ ನಾಯಕರಿಂದ ಬಿರುಸುಗೊಂಡ ಪ್ರಚಾರ**
- **ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ; ವಾಷಿಂಗ್ಟನ್‌ನಲ್ಲಿ ಮುಂದುವರಿದ ನಿಯೋಗ ಮಟ್ಟದ ಮಾತುಕತೆ**
- **ಇಂದು ರಾಷ್ಟ್ರೀಯ ನಾಗರಿಕ ಸೇವಾ ದಿನ ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ**
- **ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದಿನ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್-ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ**

**<>><><*><><<>**

ತಮಿಳುನಾಡಿನಲ್ಲಿ ಒಂದೇ ಹಂತ ಮತ್ತು ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ತೆರೆ ಬೀಳಲಿದೆ. ವಿವಿಧ ರಾಜಕೀಯ ಪಕ್ಷಗಳ ಉನ್ನತ ನಾಯಕರು ಸತತ ರ್‍ಯಾಲಿಗಳು ಮತ್ತು ಸಾರ್ವಜನಿಕ ಸಭೆಗಳ ಮೂಲಕ ಮತದಾರರನ್ನು ಸೆಳೆಯಲು ಅಂತಿಮ ಪ್ರಯತ್ನ ನಡೆಸುತ್ತಿದ್ದಾರೆ. ಎರಡೂ ರಾಜ್ಯಗಳಲ್ಲಿ ಇದೇ ಗುರುವಾರ ಮತದಾನ ನಡೆಯಲಿದೆ. ಪಶ್ಚಿಮ ಬಂಗಾಳದಲ್ಲಿ ೨ನೇ ಹಂತದ ಮತದಾನ ಇದೇ ೨೯ರಂದು ನಡೆಯಲಿದೆ. ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ಮತ ಎಣಿಕೆ ಕಾರ್ಯ ಮೇ ೪ ರಂದು ನಡೆಯಲಿದೆ. ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದಲ್ಲಿ ೧೫೨ ಕ್ಷೇತ್ರಗಳಿಗೆ ಇದೇ ಗುರುವಾರ ಮತದಾನ ನಡೆಯಲಿದೆ. ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಸಿಲಿಗುರಿ, ಪಶ್ಚಿಮ ಬರ್ಧಮಾನ್, ಪಶ್ಚಿಮ ಮೇದಿನಿಪುರ ಮತ್ತು ಪೂರ್ವ ಮೇದಿನಿಪುರ ಜಿಲ್ಲೆಗಳಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಬೆಂಬಲಿಸಿ ಸಾರ್ವಜನಿಕ ರ್‍ಯಾಲಿಗಳನ್ನು ನಡೆಸಲಿದ್ದಾರೆ. ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರು, ಪೂರ್ವ ಮೇದಿನಿಪುರದ ಹಲ್ದಿಯಾ, ಉತ್ತರ ೨೪ ಪರಗಣ ಜಿಲ್ಲೆಯ ಬರಾಕ್‌ಪೋರ್ ಮತ್ತು ಜಗತ್‌ದಾಲ್ ಹಾಗೂ ಕೊಲ್ಕತ್ತಾದಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಮತ ಯಾಚಿಸಲಿದ್ದಾರೆ. ಇನ್ನೊಂದೆಡೆ, ಮುಖ್ಯ

ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, ಚುನಾವಣಾ ನಿರ್ವಹಣೆಯಲ್ಲಿ ತೊಡಗಿರುವ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು. ಚುನಾವಣೆಗಳು ಭಯ-ಮುಕ್ತ, ಹಿಂಸಾಚಾರ-ಮುಕ್ತ ಮತ್ತು ಬೆದರಿಕೆ-ಮುಕ್ತವಾಗಿರುತ್ತದೆ ಎಂದು ಅವರು ಭರವಸೆ ನೀಡಿದ್ದಾರೆ.

**<>><><*><><<>**

ಭಾರತ ಮತ್ತು ಅಮೆರಿಕ ಎರಡೂ ದೇಶಗಳ ನಡುವಿನ ಬಹುನಿರೀಕ್ಷಿತ ವ್ಯಾಪಾರ ಒಪ್ಪಂದಕ್ಕೆ ಅಂತಿಮ ರೂಪ ನೀಡುವ ನಿಟ್ಟಿನಲ್ಲಿ ವಾಷಿಂಗ್ಟನ್‌ನಲ್ಲಿ ಹೊಸ ಸುತ್ತಿನ ವ್ಯಾಪಾರ ಮಾತುಕತೆಗಳು ಪ್ರಾರಂಭವಾಗಿವೆ. ಭಾರತದ ಮುಖ್ಯ ಸಮಾಲೋಚಕ, ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ದರ್ಪಣ್ ಜೈನ್ ಮತ್ತು ವಿದೇಶಾಂಗ ಸಚಿವಾಲಯದ ಪ್ರತಿನಿಧಿಗಳು ನಿಯೋಗದ ನೇತೃತ್ವ ವಹಿಸಿದ್ದಾರೆ. ಈ ಸಭೆಯು ಮಧ್ಯಂತರ ವ್ಯಾಪಾರ ಒಪ್ಪಂದದ ಕುರಿತು ಈಗಾಗಲೇ ನಡೆದಿರುವ ಚರ್ಚೆಗಳನ್ನು ಮುಂದಕ್ಕೆ ಕೊಂಡೊಯ್ಯುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ತುರ್ತು ಅಧಿಕಾರಗಳ ಅಡಿಯಲ್ಲಿ ವಿಧಿಸಲಾದ ವ್ಯಾಪಕ ಸುಂಕಗಳ ವಿರುದ್ಧ ಅಮೆರಿಕದ ಸುಪ್ರೀಂ ಕೋರ್ಟ್ ತೀರ್ಪಿನ ನಂತರ, ಫೆಬ್ರವರಿ ೨೪ ರಿಂದ ೧೫೦ ದಿನಗಳವರೆಗೆ ಎಲ್ಲಾ ದೇಶಗಳಿಂದ ಆಮದು ಮಾಡಿಕೊಳ್ಳುವ ಉತ್ಪನ್ನಗಳ ಮೇಲೆ ತಾತ್ಕಾಲಿಕವಾಗಿ ಶೇಕಡಾ ೧೦ ರಷ್ಟು ಸುಂಕವನ್ನು ಅಮೆರಿಕ ಪರಿಚಯಿಸಿದೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಒಡಿಶಾಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ರಾಷ್ಟ್ರಪತಿಗಳು, ರೂರ್ಕೆಲಾದಲ್ಲಿ ನಡೆಯುವ ಸಾರ್ವಜನಿಕ ಸಮಾರಂಭದಲ್ಲಿ ತಾರಾಲಯ, ವಿಜ್ಞಾನ ಕೇಂದ್ರ ಮತ್ತು ನಿರ್ಮಲ್ ಮುಂಡಾ ಪರಿವೇಶ್ ಮಾರ್ಗವನ್ನು ಉದ್ಘಾಟಿಸಲಿದ್ದಾರೆ. ಬಳಿಕ ಅವರು ರೂರ್ಕೆಲಾದಲ್ಲಿ ಬುಡಕಟ್ಟು ವಸ್ತುಸಂಗ್ರಹಾಲಯ, ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ಸಹ ಉದ್ಘಾಟಿಸಲಿದ್ದಾರೆ.

**<>><><*><><<>**

ಭಾರತ ಮತ್ತು ಕೊರಿಯಾದ ಸಾಮರ್ಥ್ಯಗಳನ್ನು ಸಂಯೋಜಿಸುವ ಮೂಲಕ ಎರಡೂ ರಾಷ್ಟ್ರಗಳ ಯುವಕರಿಗೆ ಹಲವರು ಅವಕಾಶಗಳನ್ನು ಸೃಷ್ಟಿಸಬಹುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ದಕ್ಷಿಣ ಕೊರಿಯಾ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರ ಗೌರವಾರ್ಥ ನಿನ್ನೆ ರಾಷ್ಟ್ರಪತಿಗಳು ಔತಣಕೂಟ ಆಯೋಜಿಸಿದ್ದರು. ಸುಸ್ಥಿರ ಭವಿಷ್ಯವನ್ನು ಭದ್ರಪಡಿಸಿಕೊಳ್ಳಲು ಭಾರತ ಮತ್ತು ಕೊರಿಯಾ, ಹಸಿರು ಮತ್ತು ಶುದ್ಧ ಇಂಧನ ಹಾಗೂ ಇತರೆ ಹವಮಾನ ತಂತ್ರಜ್ಞಾನಗಳಲ್ಲಿ ಸಹಕಾರಕ್ಕಾಗಿ ಅವಕಾಶಗಳನ್ನು ಅನ್ವೇಷಿಸಬೇಕು ಎಂದು ಹೇಳಿದ್ದಾರೆ. ಹಡಗು ನಿರ್ಮಾಣ, ಬಂದರು ಅಭಿವೃದ್ಧಿ, ಡಿಜಿಟಲ್ ಸಹಕಾರ, ಸಣ್ಣ ಮತ್ತು ಮಧ್ಯಮ

ಉದ್ಯಮಗಳು, ಉಕ್ಕು, ಶಿಕ್ಷಣ, ಸಂಶೋಧನೆ, ಸಂಸ್ಕೃತಿ, ಜನರಿಂದ ಜನರ ಸಂಪರ್ಕಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳು ದ್ವಿಪಕ್ಷೀಯ ಸಹಕಾರ ಹೊಂದಿರುವುದು ಶ್ಲಾಘನೀಯ ಎಂದರು. ಭಾರತ, ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದಗಳನ್ನು ಮುಂದುವರಿಸಲು ಮತ್ತು ಕೃತಕಬುದ್ಧಿಮತ್ತೆ, ಸೆಮಿಕಂಡಕ್ಟರ್‌ಗಳು, ಶುದ್ಧ ಇಂಧನ, ಎಲೆಕ್ಟ್ರಾನಿಕ್ಸ್ ಮತ್ತು ಪ್ರವಾಸೋದ್ಯಮದಂತಹ ಕ್ಷೇತ್ರಗಳಲ್ಲಿ ಕೊರಿಯಾದೊಂದಿಗೆ ಸಹಕಾರ ಬಲಪಡಿಸಲು ಎದುರು ನೋಡುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

**<><><*><><<>**

ರಾಷ್ಟ್ರೀಯ ನಾಗರಿಕ ಸೇವಾ ದಿನವಾದ ಇಂದು ಎಲ್ಲ ನಾಗರಿಕ ಸೇವಾ ಅಧಿಕಾರಿಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ದೇಶದ ನಾಗರಿಕ ಸೇವಾ ಅಧಿಕಾರಿಗಳು ಸಾರ್ವಜನಿಕ ಸೇವೆಯ ಅತ್ಯುನ್ನತ ಗುಣಮಟ್ಟವನ್ನು ಎತ್ತಿಹಿಡಿಯುವುದನ್ನು ಮುಂದುವರಿಸಬೇಕು. ಹೆಚ್ಚು ಸಮಾನ ಮತ್ತು ಪ್ರಗತಿಪರ ರಾಷ್ಟ್ರ ನಿರ್ಮಾಣಕ್ಕೆ ಅರ್ಥಪೂರ್ಣ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು. ನಾಗರಿಕ ಸೇವಾ ಅಧಿಕಾರಿಗಳು, ದೇಶದ ಆಡಳಿತದ ಶಾಶ್ವತ ಆಧಾರಸ್ತಂಭವಾಗಿದ್ದಾರೆ. ಆಡಳಿತವನ್ನು ಬಲಪಡಿಸುವಲ್ಲಿ ಮತ್ತು ಸಾರ್ವಜನಿಕ ಸೇವೆಗಳನ್ನು ಒದಗಿಸುವಲ್ಲಿ ಅವರ ಪ್ರಯತ್ನಗಳು ಮಹತ್ವದ್ದಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ತಳಮಟ್ಟದಿಂದ ನೀತಿ ನಿರೂಪಣೆಯವರೆಗೆ ನಾಗರಿಕ ಸೇವಾ ಅಧಿಕಾರಿಗಳ ಪ್ರಯತ್ನಗಳು ದೇಶದ ಪ್ರಗತಿಗೆ ಕೊಡುಗೆ ನೀಡುತ್ತವೆ. ನಾಗರಿಕ ಸೇವಾ ಅಧಿಕಾರಿಗಳು ಶ್ರೇಷ್ಠತೆ, ಸಹಾನುಭೂತಿ ಮತ್ತು ನಾವೀನ್ಯತೆಯಿಂದ ಸೇವೆ ಸಲ್ಲಿಸುವುದನ್ನು ಮುಂದುವರಿಸಬೇಕು ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ.

**<><><*><><<>**

ಜೆಇಇ ಮುಖ್ಯ ಪರೀಕ್ಷೆ-೨ ರ ಫಲಿತಾಂಶಗಳನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಬಿಡುಗಡೆ ಮಾಡಿದೆ. ಒಟ್ಟು ಎರಡು ಲಕ್ಷ ೫೦ ಸಾವಿರ ೧೮೨ ಆಕಾಂಕ್ಷಿಗಳು ಜೆಇಇ ಅಡ್ವಾನ್ಸ್‌ಗೆ ಅರ್ಹತೆ ಪಡೆದಿದ್ದಾರೆ. ಈ ತಿಂಗಳು ನಡೆದ ಪರೀಕ್ಷೆ-೨ ರಲ್ಲಿ ಒಟ್ಟು ೧೦ ಲಕ್ಷ ೩೪ ಸಾವಿರ ೩೨೦ ಅಭ್ಯರ್ಥಿಗಳು ಹಾಜರಾಗಿದ್ದರು. ಪರೀಕ್ಷೆಯ ಎರಡೂ ಸೆಷನ್‌ಗಳಲ್ಲಿ ಹಾಜರಾದ ಅಭ್ಯರ್ಥಿಗಳಿಗೆ, ಎರಡೂ ಸೆಷನ್‌ಗಳ ಪೈಕಿ ಅತ್ಯುತ್ತಮ ಸ್ಕೋರ್ ಅನ್ನು ಘೋಷಿಸಲಾಗಿದೆ ಎಂದು ಪರೀಕ್ಷಾ ಸಂಸ್ಥೆ ತಿಳಿಸಿದೆ.

**<><><*><><<>**

ಎರಡೂ ದೇಶಗಳ ನಡುವಿನ ಕಾರ್ಯತಂತ್ರದ ರಕ್ಷಣಾ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇಂದಿನಿಂದ ಜರ್ಮನಿಗೆ ಮೂರು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಭೇಟಿಯು ರಕ್ಷಣಾ ಸಹಕಾರ ಉಪಕ್ರಮಗಳನ್ನು ಪರಿಶೀಲಿಸಲು ಮತ್ತು ಎರಡೂ ದೇಶಗಳ ರಕ್ಷಣಾ ಕೈಗಾರಿಕೆಗಳ ನಡುವಿನ ಸಹಯೋಗಕ್ಕಾಗಿ ಹೊಸ ಮಾರ್ಗಗಳನ್ನು ಗುರುತಿಸಲು ಅವಕಾಶ ಒದಗಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಸಚಿವ ರಾಜನಾಥ್ ಸಿಂಗ್ ಅವರು ಜರ್ಮನಿ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ರಕ್ಷಣಾ ಕೈಗಾರಿಕಾ ಸಹಯೋಗ ಹೆಚ್ಚಿಸುವುದು, ಸೈಬರ್ ಭದ್ರತೆ, ಕೃತಕ ಬುದ್ಧಿಮತ್ತೆ ಮತ್ತು ಡ್ರೋನ್‌ಗಳಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಅನ್ವೇಷಿಸುವ ಬಗ್ಗೆ ಚರ್ಚೆಗಳು ಗಮನಹರಿಸಲಿವೆ. ವಿಶ್ವಸಂಸ್ಥೆ ಶಾಂತಿಪಾಲನಾ ಕಾರ್ಯಾಚರಣೆ ತರಬೇತಿಯಲ್ಲಿ ಸಹಕಾರಕ್ಕಾಗಿ ರಕ್ಷಣಾ ಕೈಗಾರಿಕಾ ಸಹಕಾರ ಮಾರ್ಗಸೂಚಿ ಮತ್ತು ಅನುಷ್ಠಾನ ವ್ಯವಸ್ಥೆಗೆ ಇದೇ ವೇಳೆ ಸಹಿ ಹಾಕುವ ಸಾಧ್ಯತೆಯಿದೆ. ಮೇಕ್-ಇನ್-ಇಂಡಿಯಾ ಉಪಕ್ರಮದ ಅಡಿಯಲ್ಲಿ ಜಂಟಿ ಅಭಿವೃದ್ಧಿ ಮತ್ತು ಸಹ-ಉತ್ಪಾದನೆಯನ್ನು ಉತ್ತೇಜಿಸುವ ದೃಷ್ಟಿಯಿಂದ ರಕ್ಷಣಾ ಸಚಿವರು, ಜರ್ಮನ್ ರಕ್ಷಣಾ ಉದ್ಯಮದ ಪ್ರಮುಖ ಪ್ರತಿನಿಧಿಗಳೊಂದಿಗೆ ಸಂವಹನ ನಡೆಸುವ ನಿರೀಕ್ಷೆಯಿದೆ. ಈ ಭೇಟಿಯು ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಕೊಡುಗೆ ನೀಡುವ ಗುರಿಯನ್ನು ಹೊಂದಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<>><><*><><<>

ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ೯೯ ರನ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ.

<>><><*><><<>

೨೦೧೧ ರಿಂದ ಆಪಲ್ ಕಂಪನಿಯನ್ನು ಮುನ್ನಡೆಸುತ್ತಿರುವ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಟಿಮ್ ಕುಕ್, ಈ ವರ್ಷ ಸೆಪ್ಟೆಂಬರ್ ೧ ರಂದು ತಮ್ಮ ೧೫ ವರ್ಷಗಳ ನಾಯಕತ್ವದ ಅವಧಿಯನ್ನು ಕೊನೆಗೊಳಿಸಲಿದ್ದು, ಕಾರ್ಯನಿರ್ವಾಹಕ ಅಧ್ಯಕ್ಷರ ಹುದ್ದೆಗೆ ಸ್ಥಳಾಂತರಗೊಳ್ಳಲಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೨೦ ಕ್ಕೆ  ><><<>